ಹೆಚ್ಚುವರಿ ಹಿರಿಯ  ವ್ಯವಹಾರ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಸಾಗರ

ಸಿ.ಸಿ. ನಂ. 1536/2024

ಸಾಕ್ಷಿದಾರರ ಹೆಸರು : ಅಶ್ಫಾಕ್

ತಂದೆಯ/ಗಂಡನ ಹೆಸರು : ಅಬ್ದುಲ್ ರಶೀದ್

ವಯಸ್ಸು : 41 ವರ್ಷ

ಉದ್ಯೋಗ : ವ್ಯಾಪಾರ

ವಾಸಃ : ಸಾಗರ

ಸಿ ಡಬ್ಲ್ಯೂ–4 ಪಿ.ಡಬ್ಲ್ಯೂ–3

ದಿನಾಂಕ 23.04.2025 ರಂದು ಸಾಕ್ಷಿಗೆ ಪ್ರಮಾಣ ಭೋಧಿಸಲಾಯಿತು.

ಮುಖ್ಯ ವಿಚಾರಣೆ:– ಸ.ಸ. ಅ ರವರಿಂದಃ

ನನಗೆ ಆರೋಪಿ ಪರಿಚಯ ಇರುವುದಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿರುವುದಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಗೊತ್ತಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ಇರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಸ್ಥಳ ಪಂಚನಾಮೆಯನ್ನು ನಿಶಾನೆ ಪಿ 4 ಎಂದು, ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 4(ಎ) ಎಂದು ಗುರುತಿಸಲಾಯಿತು. ನಿಶಾನೆ ಪಿ 4 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ. ನಿಶಾನೆ ಪಿ 4 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ನಾನು ಸಹಿಯನ್ನು ಹಾಕಿರುತ್ತೇನೆ.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ವಾಹನ ತಡೆ ಪಂಚನಾಮೆ ಅನ್ನು ನಿಶಾನೆ ಪಿ 5 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 5(ಎ) ಎಂದು ಗುರುತಿಸಲಾಯಿತು. ನಿಶಾನೆ ಪಿ 5 ರಲ್ಲಿ ಬರೆದಿರುವ ಅಂಶಗಳು ನನಗೆ ಗೊತ್ತಿರುವುದಿಲ್ಲ. ನಿಶಾನೆ ಪಿ 5 ಕ್ಕೆ ಪೋಲಿಸರ ಕೋರಿಕೆಯ ಮೇರೆಗೆ ನಾನು ಸಹಿಯನ್ನು ಹಾಕಿರುತ್ತೇನೆ.

ನಿಶಾನೆ ಪಿ 5 ರಡಿಯಲ್ಲಿ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

ಪೋಲಿಸರು ಈ ಪ್ರಕರಣದ ಬಗ್ಗೆ ನನ್ನನ್ನು ವಿಚಾರಣೆ ಮಾಡಿರುವುದಿಲ್ಲ. ನಾನು ಯಾವುದೇ ಹೇಳಿಕೆಯನ್ನು ಪೋಲಿಸರಿಗೆ ನೀಡಿರುವುದಿಲ್ಲ.

( ಸಾಕ್ಷಿಯನ್ನು ಸರ್ಕಾರಿ ವಕೀಲರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)

<u>ಪಾಟೀ ಸವಾಲು ಸ.ಸ.ಅ ರವರಿಂದಃ</u>

ದಿನಾಂಕಃ 08.08.2021 ರಂದು ಬೆಃ 10 ರಿಂದ 11 ಗಂಟೆಯವರೆಗೆ ನಿಶಾನೆ ಪಿ 4 ರಂತೆ ಪೋಲಿಸರು ಮಹಜರ್ ಅನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಶಾನೆ ಪಿ 4 ಅನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಶಾನೆಪಿ 2 ರಡಿಯಲ್ಲಿ ಮುದ್ದೇಮಾಲುಗಳನ್ನು ವಶಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ .

ದಿನಾಂಕಃ 08.08.2021 ರಂದು ಬೆಃ 11.15 ರಿಂದ 12 ನಿಪಿ 5 ರಂತೆ ಪೋಲಿಸರು ಮಹಜರ್ ಅನ್ನು ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಶಾನೆ ಪಿ 5 ಅನ್ನು ಓದಿ ನೋಡಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ನಿಶಾನೆಪಿ 5 ರಡಿಯಲ್ಲಿ ಮುದ್ದೇಮಾಲುಗಳನ್ನು ವಶಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ .

ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಾ ಎಂದರೆ ಸರಿಯಲ್ಲ.

ಆರೋಪಿ ಪರ ಪಾಟೀ ಸವಾಲು ಇಲ್ಲ.

ಮರು ವಿಚಾರಣೆ ಇಲ್ಲ.

(ತೆರೆದ ನ್ಯಾದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಗಣಕೀಕರಣಗೊಳಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಹಿರಿಯ ವ್ಯವಹಾರ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಸಾಗರ.